ದಿ: 12.06.2026

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 230/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಶಿವಲಿಂಗಪ್ಪ.ಆರ್ | ಪ್ರಾ.ಸಾ.6 |
| ತಂದೆಯ/ಗಂಡನ ಹೆಸರು | : | ರುದ್ರಪ್ಪ | ಚಾ.ಸಾ.8 |
| ವಯಸ್ಸು | : | 45 ವರ್ಷ | |
| ಕೆಲಸ | : | ಮುಖ್ಯ ಪೇದೆ. ಹೊಳಲ್ಕೆರೆ ಪೊಲೀಸ್ ಠಾಣೆ, ಹೊಳಲ್ಕೆರೆ | ಸಾ ಪ್ರ ಬೋ |
| ವಾಸ | : | ಹೊಳಲ್ಕೆರೆ | ದಿ:12.06.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದ:**

ನಾನು ಡಿಸೆಂಬರ್ 2019 ರಿಂದ ಇಲ್ಲಿಯವರೆಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ.

2. ದಿನಾಂಕ 17.11.2022 ರಂದು ರಾತ್ರಿ 7.15 ಗಂಟೆಗೆ ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಹೊಳಲ್ಕೆರೆ ಸಾರ್ವಜನಿಕ ಆಸ್ಪತ್ರೆಯಿಂದ ಬಂದಂತಹ ಮೆಮೊ ಪಡೆದುಕೊಂಡು, ಆಸ್ಪತ್ರೆಗೆ ಭೇಟಿನೀಡಿ, ಚಾಸಾ.1 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿ ಆಸ್ಪತ್ರೆಯಿಂದ ಬಂದ ಮೆಮೊವನ್ನು ನೋಡಿ ಗುರುತಿಸಿದ್ದು, ನಿಪಿ.7 ಎಂದು, ಸಾಕ್ಷಿಯ ಸಹಿಯನ್ನು ನಿಪಿ.7(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ.1 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ನಿಪಿ.1(ಬಿ) ಎಂದು ಗುರುತಿಸಲಾಯಿತು. ಚಾಸಾ.1 ರವರ ಹೇಳಿಕೆಯನ್ನು ಪಡೆದುಕೊಂಡು ಠಾಣೆಗೆ ಬಂದು ಠಾಣಾ ಮೊಕದ್ದಮೆ ಸಂಖ್ಯೆ 347/2022 ರಂತೆ ಪ್ರ.ವ. ವರದಿಯನ್ನು ದಾಖಲಿಸಿಕೊಂಡು, ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗೆ ವರದಿ ಮಾಡಿರುತ್ತೇನೆ. ಸಾಕ್ಷಿ ಪ್ರ.ವ. ವರದಿಯನ್ನು ನೋಡಿ ಗುರುತಿಸಿದ್ದು, ಪ್ರ.ವ. ವರದಿಯನ್ನು ನಿಪಿ.8 ಎಂದು, ಸಾಕ್ಷಿಯ ಸಹಿಯನ್ನು ನಿಪಿ.8(ಎ) ಎಂದು ಗುರುತಿಸಲಾಯಿತು. ದಿ.18.11.2022 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿನೀಡಿ, ಚಾಸಾ.4 ರವರು ಸ್ಥಳ ತೋರಿಸಿದ ಮೇರೆಗೆ ಚಾಸಾ.2 ಮತ್ತು 3 ರವರ ಸಮಕ್ಷಮ ಮದ್ಯಾಹ್ನ 3.30 ರಿಂದ 4.15 ರವರೆಗೆ ಸ್ಥಳ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸಾಕ್ಷಿ ಸ್ಥಳ ಪಂಚನಾಮೆಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ಪಂಚನಾಮೆಯ ಕಾಲಕ್ಕೆ ಛಾಯಾಚಿತ್ರ ತೆಗೆದಿರುತ್ತೇನೆ. ಸಾಕ್ಷಿ ನಿಪಿ.3 ರ ಛಾಯಾಚಿತ್ರದಲ್ಲಿ ಕೃತ್ಯ ನಡೆದ ಸ್ಥಳವನ್ನು ನೋಡಿ ಗುರುತಿಸಿರುತ್ತಾರೆ, ಮಹಜರಿನ ಕಾಲಕ್ಕೆ ಮು.ಮಾ.1 ಮತ್ತು 2 ರ ಕೋಲುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಮಹಜರಿನ ಸಮಯದಲ್ಲಿ ಚಾಸಾ.2 ಮತ್ತು 3 ರವರಿಗೆ ನೋಟೀಸನ್ನು ನೀಡಿದ್ದೆನು. ಸಾಕ್ಷಿ ನಿಪಿ.4 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು,

ದಿ: 12.06.2026

ನಿಪಿ.4(ಬಿ) ಎಂದು ಗುರುತಿಸಲಾಯಿತು. ಅಮಾನತ್ತುಪಡಿಸಿಕೊಂಡ ಮುದ್ದೆಮಾಲನ್ನು ಮಾಲುಪಟ್ಟಿಯಲ್ಲಿ ಅಳವಡಿಸಿಕೊಂಡು ನ್ಯಾಯಾಲಯಕ್ಕೆ ವರದಿ ಮಾಡಿರುತ್ತೇನೆ. ಅದೇ ದಿನ ಚಾಸಾ.4 ಮತ್ತು 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿ.27.12.2022 ರಂದು ಆರೋಪಿತರು ಮಾನ್ಯ ಜಿಲ್ಲಾ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನನ್ನು ಪಡೆದುಕೊಂಡು, ನನ್ನ ಸಮಕ್ಷಮ ಹಾಜರಾಗಿದ್ದು, ಭದ್ರತೆಯನ್ನು ಪಡೆದುಕೊಂಡು ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ. ನಿಪಿ.3 ರ ಛಾಯಾಚಿತ್ರವನ್ನು ತೆಗೆದ ಕುರಿತು ಚಾಸಾ.6 ರವರು ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 45(ಬಿ)ರಡಿಯಲ್ಲಿ ಪ್ರಮಾಣ ಪತ್ರವನ್ನು ನೀಡಿರುತ್ತಾರೆ. ಸಾಕ್ಷಿ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು ನಿಪಿ.9 ಎಂದು, ಸಾಕ್ಷಿಯ ಸಹಿಯನ್ನು ನಿಪಿ.9(ಎ) ಎಂದು ಗುರುತಿಸಲಾಯಿತು. ದಿ.06.03.2023 ರಂದು ಚಾಸಾ.1 ರವರ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿರುತ್ತೇನೆ. ಸಾಕ್ಷಿ ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.6(ಬಿ) ಎಂದು ಗುರುತಿಸಲಾಯಿತು. ಆರೋಪಿತನ ವಿರುದ್ಧ ಆರೋಪ ರುಜುವಾತಾದ ಹಿನ್ನಲೆಯಲ್ಲಿ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೆನೆ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಕೆ.ವಿ.ಎನ್. ವಕೀಲರಿಂದ**

3. ನಾನು ಹೊಳಲ್ಕೆರೆಯ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿಲ್ಲ ಮತ್ತು ಆಸ್ಪತ್ರೆಯಲ್ಲಿ ಚಾಸಾ.1 ರವರ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಚಾಸಾ.1 ರವರಿಗೆ ಅವಾಚ್ಯ ಶಬ್ಧಗಳಿಂದ ಬೈದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಚಾಸಾ.1 ರವರಿಗೆ ಮಾನಕ್ಕೆ ಚ್ಯುತಿಯಾಗುವಂತೆ ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ. ಯಾವುದೇ ಗಲಾಟೆ ನಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಚಾಸಾ.1 ರವರಿಗೆ ಕೊಲೆ ಬೆದರಿಕೆ ಹಾಕಿಲ್ಲ ಎಂದರೆ ಸರಿಯಲ್ಲ. ನಾನು ಪಂಚನಾಮೆಯನ್ನು ಜರುಗಿಸಿಲ್ಲ ಎಂದರೆ ಸರಿಯಲ್ಲ. ನಾನು ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಮು.ಮಾ.1 ಮತ್ತು 2 ಎಲ್ಲಾ ಕಡೆ ಸಿಗುತ್ತವೆ ಎಂದರೆ ಸರಿಯಲ್ಲ. ನಾನು ಯಾವುದೇ ತನಿಖೆಯನ್ನು ನಡೆಸದೆ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ